# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE : 14/2/22

# ಭಾರತದಲ್ಲಿ ಮೆಕಾಲೆ ಶಿಕ್ಷಣ ನೀತಿ ರದ್ದಾಗಲಿ

## ನಗರದಲ್ಲಿ ಎಬಿವಿಪಿ ಪ್ರಾಂತ ಸಮ್ಮೇಳನ ಉದ್ಘಾಟನೆ


ವಿಜಯವಾಣಿ ಚಿತ್ರ

ಎಬಿವಿಪಿ ಏರ್ಪಡಿಸಿರುವ ಪ್ರಾಂತ ಸಮ್ಮೇಳನವನ್ನು ವಿಧಾನಸಭೆ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಉದ್ಘಾಟಿಸಿದರು. 'ಪದ್ಮಶ್ರೀ' ಪುರಸ್ಕೃತ ಕೆ.ವೈ.ವೆಂಕಟೇಶ್, ಎಬಿವಿಪಿ ರಾಷ್ಟ್ರೀಯ ಕಾರ್ಯದರ್ಶಿ ಹರ್ಷ ನಾರಾಯಣ, ಜಿ.ಲಕ್ಷ್ಮಣ್ ಮತ್ತಿತರರಿದ್ದರು.

ಬೆಂಗಳೂರು: ದೇಶದಲ್ಲಿ ಮೆಕಾಲೆ ಶಿಕ್ಷಣ ನೀತಿ ರದ್ದಾಗಿ ಕೌಶಲಯುತ ಶಿಕ್ಷಣ ಜಾರಿಯಾಗಬೇಕು ಎಂದು ವಿಧಾನಸಭೆ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅಭಿಪ್ರಾಯಪಟ್ಟಿದ್ದಾರೆ.

ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್( ಎಬಿವಿಪಿ) ನಗರದಲ್ಲಿ ಏರ್ಪಡಿಸಿರುವ 2 ದಿನಗಳ ಪ್ರಾಂತ ಸಮ್ಮೇಳನವನ್ನು ಶನಿವಾರ ಉದ್ಘಾಟಿಸಿ ಮಾತನಾಡಿದರು. ಮೆಕಾಲೆ ಶಿಕ್ಷಣ ನೀತಿ ರದ್ದುಗೊಂಡು ಯುವ ಸಮುದಾಯಕ್ಕೆ ಅಗತ್ಯವಿರುವ ಕೌಶಲಯುತ ಶಿಕ್ಷಣ ಲಭ್ಯವಾಗಬೇಕು ಎಂದರು. ನಾನು ವಿಧಾನಸಭೆ ಸ್ಪೀಕರ್ ಆಗಿರುವುದಕ್ಕೆ ಎಬಿವಿಪಿ ಕಾರಣ. ಸಂಘಟನೆಯ ತತ್ತ್ವ-ಸಿದ್ಧಾಂತ ಶ್ರೇಷ್ಠವಾದವು. ಅದೇ ವಿಚಾರಧಾರೆಯಲ್ಲಿ ನಾನು ಬೆಳೆದು ಬಂದಿದ್ದೇನೆ ಎಂದು ಹೇಳಿದರು.

> **2020ರಲ್ಲಿ** ಕರೊನಾ ಸೋಂಕು ದೇಶಕ್ಕೆ ಮಾರಕವಾಗಿತ್ತು. ಅದನ್ನು ನಿಯಂತ್ರಿಸುವಲ್ಲಿ ಸರ್ಕಾರ ಸಫಲವಾಗಿದೆ. 2021ರ ಪ್ರಾಂತ ಸಮ್ಮೇಳನ ಹೊಸತನದಿಂದ ಕೂಡಿದೆ. ಪರಿಷತ್ ಸದಸ್ಯರ ಕನಸಿನಂತೆ ಭಾರತ ವಿಶ್ವಗುರುವಾಗುವತ್ತ ಮುನ್ನಡೆದಿದೆ.
>
> | [illegible]
> ಎಬಿವಿಪಿ ರಾಷ್ಟ್ರೀಯ ಕಾರ್ಯದರ್ಶಿ

ಎಬಿವಿಪಿ ನಿರಂತರವಾದ ಆಂದೋಲನವಾಗಿದೆ. ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೆ ತಂದ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಅಭಿನಂದನೆ ಸಲ್ಲಿಸಬೇಕು. ವಿದ್ಯಾರ್ಥಿಗಳ ಪ್ರತಿಭೆಗೆ ತಕ್ಕಂತೆ ಶಿಕ್ಷಣ ಸಿಗಬೇಕು. ಆಗ ಮಾತ್ರ ನಿರುದ್ಯೋಗ ನಿರ್ಮೂಲನೆ ಆಗುತ್ತದೆ. ಯುವಕರಲ್ಲಿ ಗ್ರಾಮೀಣಾಭಿವೃದ್ಧಿ ಬಗ್ಗೆ ಅರಿವು ಮೂಡಿಸಬೇಕಿದೆ. ಆತ್ಮನಿರ್ಭರ್, ವೋಕಲ್ ಫಾರ್ ಲೋಕಲ್, ರಾಷ್ಟ್ರೀಯ ಶಿಕ್ಷಣ ನೀತಿಯ ಮೂಲಕ ವಿದ್ಯಾರ್ಥಿಗಳನ್ನು ಸಿದ್ಧಪಡಿಸಬೇಕು ಎಂದು ಸಲಹೆ ನೀಡಿದರು.

'ಪದ್ಮಶ್ರೀ' ಪ್ರಶಸ್ತಿ ಪುರಸ್ಕೃತ ಅಂತಾರಾಷ್ಟ್ರೀಯ ಪ್ಯಾರಾ ಅಥ್ಲೀಟ್ ಕೆ.ವೈ. ವೆಂಕಟೇಶ್ ಮಾತನಾಡಿ, ಶಿಕ್ಷಣ ಕ್ಷೇತ್ರದಲ್ಲಿ ಎಬಿವಿಪಿ ಉತ್ತಮ ಕೆಲಸಗಳನ್ನು ಮಾಡುತ್ತಿದೆ. ಈ ಸಂಘಟನೆಯ ಕೆಲಸ ಹೀಗೆ ಮುಂದುವರಿಯಲಿ ಎಂದು ಆಶಿಸಿದರು. ಎಬಿವಿಪಿ ಸಹ ಸಂಘಟನಾ ಕಾರ್ಯದರ್ಶಿ ಜಿ. ಲಕ್ಷ್ಮಣ್, ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ.ಎಸ್. ರಾಜೇಂದ್ರ ಪ್ರಸಾದ್ ಮತ್ತಿತರರಿದ್ದರು.